**ಅಸಲು ದಾವಾ ಸಂಖ್ಯೆಃ 142/2021 ಪಿ.ಡಬ್ಲ್ಯೂಃ 1**

**ಸಾಕ್ಷಿಯು ದಿನಾಂಕ 21-09-2024 ರಂದು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣವಚನ ನೀಡಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ.ಎಸ್.ಎಲ್ ನ್ಯಾಯವಾದಿಗಳಿಂದಃ**

ನಾನು ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿವೆ, ಅದರಲ್ಲಿರುವ ಅಂಶಗಳನ್ನು ಅರ್ಥೈಸಿಕೊಂಡ ನಂತರ ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ನೋಟರೀಕೃತ ವಂಶವೃಕ್ಷ ಹಾಜರು ಪಡಿಸಿದ್ದು ಅದನ್ನು ನಿಪಿ-**1** ಎಂದು ಗುರುತಿಸಲಾಯಿತು. ದಿನಾಂಕ **01-04-1942** ರಿಂದ **30-03-1943** ರ ವರೆಗಿನ ಋಣಭಾರ ಪ್ರಮಾಣ ಪತ್ರ ಹಾಜರು ಪಡಿಸಿದ್ದು ಅದನ್ನು ನಿಪಿ-**2** ಎಂದು ಗುರುತಿಸಲಾಯಿತು. ದಿನಾಂಕ **01-04-1955** ರಿಂದ **31-03-2011** ರ ವರೆಗಿನ ಋಣಭಾರ ಪ್ರಮಾಣ ಪತ್ರ ಹಾಜರು ಪಡಿಸಿದ್ದು ಅದನ್ನು ನಿಪಿ-**3** ಎಂದು ಗುರುತಿಸಲಾಯಿತು. **3** ಕೈ ಬರವಣಿಗೆ ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ **4** ರಿಂದ **6** ಎಂದು ಗುರುತಿಸಲಾಯಿತು. **3** ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ **7** ರಿಂದ **9** ಎಂದು ಗುರುತಿಸಲಾಯಿತು. ಎಂ ಆರ್ ಗಣಕೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-**10** ಎಂದು ಗುರುತಿಸಲಾಯಿತು. ದಿನಾಂಕ **01-10-1942** ರ ಮತ್ತು **27-03-1957** ರ ನೊಂದಾಯಿತ ಕ್ರಯಪತ್ರದ ದೃಡೀಕೃತ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಪ್ರತಿವಾದಿಯ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ-**11** ಮತ್ತು **12** ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿಯ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಸಾ . ಹೇ . ಬಿ. ಮಾಡಿಸಲಾಯಿತು.**

**ಓ.ಹೇ.ಕೇ.ಸ.ಇದೆ**

ಅಪರ ಸಿವಿಲ್ ನ್ಯಾಯಾಧೀಶರು
**ನಾಗಮಂಗಲ**